**ಕರ್ನಾಟಕ ವಿಧಾನ ಪರಿಷತ್ತು**
**ನೂರ ಐವತ್ತಾರನೆಯ ಅಧಿವೇಶನ**

# ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–37)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2018ನ್ನು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2018 (2018ರ ಕರ್ನಾಟಕ ಅಧಿನಿಯಮ ಸಂಖ್ಯೆ 12)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018 (2018ರ ಕರ್ನಾಟಕ ಅಧಿನಿಯಮ ಸಂಖ್ಯೆ 12)ರ, 3ನೇ ಪ್ರಕರಣದ, (4)ನೇ ಉಪಪ್ರಕರಣದಲ್ಲಿರುವ, (ಎ) ಖಂಡದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(ಎ) ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾರೇ ಇತರ ಮಂತ್ರಿ - ಪದನಿಮಿತ್ತ ಅಧ್ಯಕ್ಷರು ".

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾವುದೇ ಇತರ ಮಂತ್ರಿಯವರು ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗುವ ಕುರಿತಾದ ಉಪಬಂಧವನ್ನು ಪರಿಷ್ಕರಿಸಲು, ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2018 (2018ರ ಕರ್ನಾಟಕ ಅಧಿನಿಯಮ ಸಂಖ್ಯೆ 12)ನ್ನು, ಮತ್ತಷ್ಟು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ,

## ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮದಿಂದ ಯಾವುದೇ ಹೆಚ್ಚಿನ ವೆಚ್ಚವು ಉಂಟಾಗುವುದಿಲ್ಲ.

**ಕೃಷ್ಣ ಭೈರೇಗೌಡ**
ಕಂದಾಯ ಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

**ಅನುಬಂಧ**

**ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018ರ**

**(2018ರ ಕರ್ನಾಟಕ ಅಧಿನಿಯಮ ಸಂಖ್ಯೆ 12) ಉದ್ಧೃತ ಭಾಗ**

**XXX XXX XXX**

**3. ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ.-** (1) ಈ ಅಧಿನಿಯಮದ ಪ್ರಾರಂಭದ ತರುವಾಯ ಆದಷ್ಟು ಬೇಗನೆ, ಈ ಅಧಿನಿಯಮದ ಉದ್ದೇಶಗಳಿಗಾಗಿ ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಎಂದು ಕರೆಯಲಾಗುವ ಒಂದು ಪ್ರಾಧಿಕಾರವನ್ನು ರಚಿಸತಕ್ಕದ್ದು.

(2) ಪ್ರಾಧಿಕಾರವು ಬೆಂಗಳೂರಿನಲ್ಲಿ ತನ್ನ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರತಕ್ಕದ್ದು.

(3) ಪ್ರಾಧಿಕಾರವು, ಶಾಶ್ವತ ಉತ್ತರಾಧಿಕಾರ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಚರ ಮತ್ತು ಸ್ಥಿರ ಸ್ವತ್ತುಗಳೆರಡನ್ನು ಆರ್ಜಿಸುವ, ಧಾರಣ ಮಾಡುವ ಮತ್ತು ವಿಲೆ ಮಾಡುವ ಹಾಗೂ ಕರಾರು ಮಾಡಿಕೊಳ್ಳುವ ಅಧಿಕಾರವನ್ನು ಹೊಂದಿರುವ, ಮೇಲೆ ಹೇಳಿದ ಹೆಸರಿನ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ದಾವೆಗೆ ಗುರಿಯಾಗತಕ್ಕದ್ದು

(4) ಪ್ರಾಧಿಕಾರವು ಈ ಮುಂದಿನ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(ಎ) ಮುಖ್ಯಮಂತ್ರಿಯವರು - ಅಧ್ಯಕ್ಷರು;

(ಬಿ) ರಾಮನಗರದ ಉಸ್ತುವಾರಿ ಪ್ರಭಾರದಲ್ಲಿರುವ ಸಚಿವರು- ಉಪಾಧ್ಯಕ್ಷರು;

(ಸಿ) ಕಂದಾಯ ಮಂತ್ರಿಗಳು - ಪದನಿಮಿತ್ತ ಸದಸ್ಯರು;

(ಡಿ) ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು - ಪದನಿಮಿತ್ತ ಸದಸ್ಯರು;

(ಇ) ಬೆಂಗಳೂರು ಗ್ರಾಮಾಂತರ ಲೋಕಸಭಾ ಚುನಾವಣಾ ಕ್ಷೇತ್ರದ ಸಂಸತ್ ಸದಸ್ಯರು, ಬೆಂಗಳೂರು ನಗರವನ್ನು ಪ್ರತಿನಿಧಿಸುವ ಒಬ್ಬರು ರಾಜ್ಯಸಭಾ ಸದಸ್ಯರು ಮತ್ತು ಯಲಹಂಕ ಹಾಗೂ ಮಾಗಡಿ ಚುನಾವಣಾ ಕ್ಷೇತ್ರಗಳ ರಾಜ್ಯ ವಿಧಾನ ಸಭೆ ಸದಸ್ಯರು - ಪದನಿಮಿತ್ತ ಸದಸ್ಯರು;

(ಎಫ್) ಮೇಯರ್, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ - ಪದನಿಮಿತ್ತ ಸದಸ್ಯರು;

(ಜಿ) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಅಥವಾ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ಕಂದಾಯ ಇಲಾಖೆ - ಪದನಿಮಿತ್ತ ಸದಸ್ಯರು;

**XXX XXX XXX**

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಕಾಸೂ , ಪ್ರತಿಗಳು 300, 12ನೇ ಆಗಸ್ಟ್ 2025